**Akashvani: Bangalore**
**Regional Bulletin In Kannada**
**28.11.2025 : 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**28.11.2025 : 14.30hrs**

******

**ಮುಖ್ಯಾಂಶಗಳು:**

1. ಉಡುಪಿ ಲಕ್ಷಕಂಠ ಗೀತ ಪಾರಾಯಣ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗಿ; ರಾಷ್ಟ್ರೀಯ ಉದ್ದೇಶದ ೯ ನಿರ್ಣಯಗಳಿಗೆ ಬದ್ಧರಾಗಲು ಮನವಿ
2. ಬೆಂಗಳೂರು ಅರಮನೆ ಮೈದಾನದಲ್ಲಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ಸುವರ್ಣ ಮಹೋತ್ಸವ; ಹಲವು ಮಹತ್ವಾಕಾಂಕ್ಷಿ ಯೋಜನೆಗಳಿಗೆ ಮುಖ್ಯಮಂತ್ರಿ ಚಾಲನೆ
3. ಬೆಳೆ ಹಾನಿ ಪರಿಹಾರದ ಹಣವನ್ನು ಸಾಲದ ಖಾತೆಗಳಿಗೆ ಹೊಂದಿಸಿಕೊಳ್ಳಬಾರದು - ಗುರುಮಠಕಲ್ ಶಾಸಕ ಆಗ್ರಹ
4. ಕ್ರಿಸ್‌ಮಸ್ ಹಬ್ಬದ ಸಂದರ್ಭದಲ್ಲಿ ನೈಋತ್ಯ ರೈಲ್ವೆಯಿಂದ ವಿಶೇಷ ರೈಲು

********

ರಾಷ್ಟ್ರೀಯ ಉದ್ದೇಶಕ್ಕಾಗಿ ಮೀಸಲಾಗಿರುವ ಒಂಬತ್ತು ನಿರ್ಣಯಗಳಿಗೆ ನಾಗರಿಕರು ಬದ್ಧತೆಯನ್ನು ತೋರಿಸಬೇಕೆಂದು ಪ್ರಧಾನಿ ನರೇಂದ್ರ ಮೋದಿ ಮನವಿ ಮಾಡಿದ್ದಾರೆ. ಅವರು ಇಂದು ಉಡುಪಿಯ ಶ್ರೀಕೃಷ್ಣ ಮಠದಲ್ಲಿ ಲಕ್ಷಕಂಠ ಗೀತ ಪಾರಾಯಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ, ನೀರು ಮತ್ತು ನಮ್ಮ ನದಿಗಳನ್ನು ಸಂರಕ್ಷಿಸಲು, ಏಕ ಪೇಡ್ ಮಾ ಕೆ ನಾಮ್‌ನ ಭಾಗವಾಗಲು, ಕನಿಷ್ಠ ಒಬ್ಬ ಬಡವನನ್ನು ಬಡತನದಿಂದ ಮೇಲೆತ್ತಲು ಮತ್ತು ನಮ್ಮ ಆರ್ಥಿಕತೆ ಮತ್ತು ನಮ್ಮ ಉದ್ಯಮಿಗಳನ್ನು

ರಕ್ಷಿಸಲು ಸ್ವದೇಶಿ ಆಂದೋಲನವನ್ನು ಪ್ರೋತ್ಸಾಹಿಸಲು ಅವರು ಜನರ ಬೆಂಬಲವನ್ನು ಕೋರಿದರು.

***ಧ್ವನಿ*** ಪ್ರಧಾನಿ

ನೈಸರ್ಗಿಕ ಕೃಷಿಯನ್ನು ಪ್ರೋತ್ಸಾಹಿಸಲು, ರಾಗಿ ಬಳಸಿ ಆರೋಗ್ಯಕರ ಜೀವನಶೈಲಿಯನ್ನು ನಡೆಸಲು, ತೈಲ ಬಳಕೆಯನ್ನು ಕಡಿಮೆ ಮಾಡಲು ಮತ್ತು ಯೋಗವನ್ನು ನಮ್ಮ ದೈನಂದಿನ ಜೀವನದ ಭಾಗವಾಗಿ ಅಳವಡಿಸಿಕೊಳ್ಳಲು ದೇಶವಾಸಿಗಳಿಗೆ ಕರೆ ನೀಡಿದ ಪ್ರಧಾನಿ, ಇಂದು ಉಲ್ಲೇಖಿಸಿದ ಒಂಬತ್ತು ನಿರ್ಣಯಗಳಲ್ಲಿ, ನಮ್ಮ ಪ್ರಾಚೀನ ಹಸ್ತಪ್ರತಿಗಳ ಸಂರಕ್ಷಣೆಯೂ ಒಂದು. ನಮ್ಮ ಪ್ರಾಚೀನ ಜ್ಞಾನವನ್ನು ಮುಂದಿನ ಪೀಳಿಗೆಗೆ ತಲುಪಿಸಬೇಕು ಎಂದು ಹೇಳಿದರು. ಪ್ರಧಾನಿ ನರೇಂದ್ರ ಮೋದಿ ಇಂದು ಬೆಳಗ್ಗೆ ಕೃಷ್ಣನಗರಿ ಉಡುಪಿಗೆ ಆಗಮಿಸಿದಾಗ, ಪೂರ್ಣ ಕುಂಭ ಸ್ವಾಗತದ ಮೂಲಕ ಶ್ರೀಕೃಷ್ಣ ಮಠದ ಮಹಾದ್ವಾರದಲ್ಲಿ ಅವರನ್ನು ಬರಮಾಡಿಕೊಳ್ಳಲಾಯಿತು. ಕನಕನ ಕಿಂಡಿಯ ಮೂಲಕ ಕೃಷ್ಣ ದರ್ಶನ ಮಾಡಿದ ಅವರು, ಕನಕ ಗೋಪುರದ ಮುಂದಿರುವ ಕನಕದಾಸರ ಪುತ್ಥಳಿಗೆ ಪುಷ್ಪಾರ್ಚನೆ ಸಲ್ಲಿಸಿ, ಸ್ವರ್ಣಲೇಪಿತ ಕನಕನ ಕಿಂಡಿ ಉದ್ಘಾಟನೆ ಮಾಡಿದರು. ಮಠದ ಪರಿಸರದಲ್ಲಿ ವೈದಿಕರಿಂದ ಉಪನಿಷತ್ತು, ವೇದ, ಗೀತೆ ಪಠಣ ನಡೆಯಿತು. ಬಳಿಕ ಕೃಷ್ಣನ ಪ್ರಸಾದ ಸ್ವೀಕರಿಸಿದ ಪ್ರಧಾನಿ, ಆಚಾರ್ಯ ಮಧ್ವರು ಕುಳಿತ ಪೀಠವನ್ನು ವೀಕ್ಷಿಸಿ, ಭೋಜನ ಶಾಲೆಯ ಮುಖ್ಯ ಪ್ರಾಣ ದೇವರು ಹಾಗೂ ಮಠದೊಳಗಿನ ವಿವಿಧ ಗುಡಿಗಳ ದರ್ಶನ ಪಡೆದರು. ಗೀತಾ ಮಂದಿರದಲ್ಲಿ ನೂತನವಾಗಿ ರಚಿಸಿರುವ ಅನಂತಪದ್ಮನಾಭ ದೇವರ ಪ್ರತಿಮೆಯನ್ನು ಅನಾವರಣಗೊಳಿಸಿದರು. ಪ್ರಧಾನಿ ಅವರಿಗೆ ಬೆಳ್ಳಿಯ ಕಡಗೋಲು ಸ್ಮರಣಿಕೆ ನೀಡಿ ಸನ್ಮಾನಿಸಲಾಯಿತು. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ, ಬನ್ನಂಜೆ ನಾರಾಯಣ ಗುರು ವೃತ್ತದ ಬಳಿಯಿಂದ ರೋಡ್ ಶೋನಲ್ಲಿ ಪಾಲ್ಗೊಂಡರು. ಇದೇ ವೇಳೆ ತಾತ್ಕಾಲಿಕವಾಗಿ ನಿರ್ಮಿಸಲಾದ

ವೇದಿಕೆಗಳಲ್ಲಿ ಯಕ್ಷಗಾನ, ಹುಲಿವೇಷ ಹಾಗೂ ಕೃಷ್ಣ ವೇಷಧಾರಿಗಳ ಪ್ರದರ್ಶನ ನಡೆಯಿತು. ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ರಾಜ್ಯಸಭಾ ಸದಸ್ಯ ವೀರೇಂದ್ರ ಹೆಗ್ಗಡೆ ಮತ್ತು ಉಡುಪಿ ಪುತ್ತಿಗೆ ಮಠದ ಸುಗುಣೇಂದ್ರ ತೀರ್ಥ ಸ್ವಾಮೀಜಿ, ಸ್ಥಳೀಯ ಸಂಸದರು ಮತ್ತು ಶಾಸಕರು ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಪುತ್ತಿಗೆ ಶ್ರೀಗಳು ಪ್ರಧಾನಿ ಅವರಿಗೆ ಭಾರತ ಭಾಗ್ಯ ವಿಧಾತ ಎಂಬ ಬಿರುದನ್ನು ನೀಡಿದರು.

********

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಬೆಂಗಳೂರಿನ ಅರಮನೆ ಮೈದಾನದಲ್ಲಿ ಆಯೋಜಿಸಿದ್ದ ಕರ್ನಾಟಕದಲ್ಲಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ "ಸುವರ್ಣ ಮಹೋತ್ಸವ", ಮಕ್ಕಳ ದಿನಾಚರಣೆ, ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿದರು. ನಂತರ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮಹತ್ವಾಕಾಂಕ್ಷಿ ಯೋಜನೆಗಳನ್ನು ಹಾಗೂ ಗೃಹಲಕ್ಷ್ಮಿ ಸಹಕಾರ ಆಪ್ ಅನ್ನು ಲೋಕಾರ್ಪಣೆಗೊಳಿಸಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರುಗಳಾದ ಲಕ್ಷ್ಮೀ ಹೆಬ್ಬಾಳ್ಕರ್, ಹೆಚ್.ಸಿ.ಮಹದೇವಪ್ಪ, ಕೆ.ಎಚ್.ಮುನಿಯಪ್ಪ, ಈಶ್ವರ ಖಂಡ್ರೆ ಸೇರಿದಂತೆ ಹಲವು ಗಣ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

********

ರಾಜ್ಯ ಸರ್ಕಾರ ರೈತರಿಗಾಗಿ ಬಿಡುಗಡೆ ಮಾಡಿರುವ ಬೆಳೆಹಾನಿ ಪರಿಹಾರದ ಹಣವು ರಾಷ್ಟ್ರೀಯ ಹಾಗೂ ಗ್ರಾಮೀಣ ಬ್ಯಾಂಕ್‌ಗಳು ಸಾಲದ ಖಾತೆಗಳಿಗೆ ಹೊಂದಿಸಿಕೊಳ್ಳುವುದನ್ನು ಕೂಡಲೇ ನಿಲ್ಲಿಸಬೇಕು ಎಂದು ಯಾದಗಿರಿ ಜಿಲ್ಲೆಯ ಗುರುಮಠಕಲ್ ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ್ ಆಗ್ರಹಿಸಿದ್ದಾರೆ. ಈ ಕುರಿತು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿರುವ ಅವರು, ಪರಿಹಾರದ ಹಣ ಸಾಲಕ್ಕೆ ಜಮೆ

ಮಾಡುಕೊಳ್ಳುವವರಿಗೆ ತಕ್ಷಣವೇ ನಿಲ್ಲಿಸುಂವತೆ ಸೂಚನೆ ನೀಡಬೇಕು. ನಿರ್ಲಕ್ಷ್ಯ ವಹಿಸಿದರೆ ರೈತರೊಂದಿಗೆ ಖುದ್ದಾಗಿ ಬ್ಯಾಂಕ್‌ಗಳ ಮುಂದೆ ಮುಷ್ಕರ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.

********

ಕ್ರಿಸ್ಮಸ್ ಹಬ್ಬದ ಸಂದರ್ಭದಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆಯನ್ನು ನಿಭಾಯಿಸಲು, ನೈಋತ್ಯ ರೈಲ್ವೆಯು ಸರ್ ಎಂ. ವಿಶ್ವೇಶ್ವರಯ್ಯ ಟರ್ಮಿನಲ್ ಬೆಂಗಳೂರು ಮತ್ತು ಬೆಳಗಾವಿ ನಡುವೆ ವಿಶೇಷ ಎಕ್ಸ್‌ಪ್ರೆಸ್ ರೈಲನ್ನು ಓಡಿಸಲಿದೆ. ರೈಲು ಸಂಖ್ಯೆ ೦೬೫೦೩ ಎಸ್‌ಎಂವಿಟಿ ಬೆಂಗಳೂರು-ಬೆಳಗಾವಿ ವಿಶೇಷ ಎಕ್ಸ್‌ಪ್ರೆಸ್ ರೈಲು ಡಿಸೆಂಬರ್ ೨೪ರಂದು ಸಂಜೆ ೭ ಗಂಟೆಗೆ ಎಸ್‌ಎಂವಿಟಿ ಬೆಂಗಳೂರಿನಿಂದ ಹೊರಟು, ಮರುದಿನ ಬೆಳಿಗ್ಗೆ ೮:೨೫ಕ್ಕೆ ಬೆಳಗಾವಿ ತಲುಪಲಿದೆ. ಮತ್ತೊಂದೆಡೆ, ಮರಳಿ ಸಂಚರಿಸುವ ರೈಲು ಸಂಖ್ಯೆ ೦೬೫೦೪ ಬೆಳಗಾವಿ-ಎಸ್‌ಎಂವಿಟಿ ಬೆಂಗಳೂರು ವಿಶೇಷ ಎಕ್ಸ್ ಪ್ರೆಸ್ ರೈಲು ಡಿಸೆಂಬರ್ ೨೮ರಂದು ಸಂಜೆ ೫:೩೦ಕ್ಕೆ ಬೆಳಗಾವಿಯಿಂದ ಹೊರಟು, ಮರುದಿನ ಬೆಳಿಗ್ಗೆ ೫ ಗಂಟೆಗೆ ಎಸ್‌ಎಂವಿಟಿ ಬೆಂಗಳೂರಿಗೆ ತಲುಪಲಿದೆ.

********

ಕೋಲಾರ ಜಿಲ್ಲೆಯ ಮಾಲೂರು ನಗರದಲ್ಲಿ ಬೀದಿನಾಯಿ ನಿಯಂತ್ರಣಕ್ಕಾಗಿ ಶೀಘ್ರದಲ್ಲೇ ಡಾಗ್ ಸೆಂಟರ್‌ಗಳನ್ನು ಸ್ಥಾಪಿಸಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಿರ್ವಹಣೆ ಮಾಡಲಾಗುವುದು ಎಂದು ಪೌರಾಯುಕ್ತ ಎ.ಬಿ.ಪ್ರದೀಪ್ ತಿಳಿಸಿದ್ದಾರೆ. ನಗರದಲ್ಲಿನ ನಾಯಿಗಳ ಸಮೀಕ್ಷೆ ಪ್ರಕಾರ ಒಂದು ಸಾವಿರದ ೬೭೭ ಬೀದಿ ನಾಯಿಗಳಿದ್ದು, ೨೦೨೧-೨೨ರಲ್ಲಿ ೯೪೪ ನಾಯಿಗಳಿಗೆ ಎಬಿಸಿ ಸಂತಾನಹರಣ ಚಿಕಿತ್ಸೆ ಮಾಡಲಾಗಿದೆ. ಪ್ರಸ್ತುತ ಬಜೆಟ್‌ನಲ್ಲಿ ೨೦ ಲಕ್ಷ ಅನುದಾನ ಮೀಸಲಿಟ್ಟಿದ್ದು, ಬೀದಿ ನಾಯಿಗಳಿಗೆ ಎಬಿಸಿ ನೀಡಲು ಚುಚ್ಚು ಮದ್ದು ಹಾಗು ಅವುಗಳನ್ನು ಹಿಡಿಯುವುದಕ್ಕಾಗಿ

ಟೆಂಡರ್ ಆಹ್ವಾನಿಸಲಾಗಿದೆ ಎಂದರು. ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ನಡೆದಿದ್ದು, ಶಾಲೆ ಕಾಲೇಜು, ಬಸ್ ನಿಲ್ದಾಣ, ಕಚೇರಿಗಳಿಗೆ ಸೂಚನೆ ನೀಡಿ ನಾಯಿಗಳ ಸಂಖ್ಯೆಯ ಮಾಹಿತಿ ಸಂಗ್ರಹಿಸಲಾಗುತ್ತಿದೆ ಎಂದರು.

ಖಾಸಗಿ-ಸರ್ಕಾರಿ ಸಂಸ್ಥೆಗಳ ಆವರಣದಲ್ಲಿ ಪುನಃ ನಾಯಿಗಳು ಕಂಡರೆ ಅವರ ಖರ್ಚಿನಲ್ಲಿ ಡಾಗ್ ಸೆಂಟರ್‌ಗೆ ಸಾಗಿಸಲು ನಿಯಮ ಜಾರಿಯಲ್ಲಿದೆ. ಉಳಿದ ಎಲ್ಲಾ ನಾಯಿಗಳಿಗೆ ಎಬಿಸಿ ಚುಚ್ಚು ಮದ್ದು ನೀಡಿ ನಾಗರಿಕರನ್ನು ಬೀದಿ ನಾಯಿಗಳ ಹಾವಳಿಯಿಂದ ರಕ್ಷಿಸಲಾಗುವುದು ಎಂದು ತಿಳಿಸಿದರು.

********

ಗದಗ ಜಿಲ್ಲೆಯಲ್ಲಿ ಮನ್ರೇಗಾ ಯೋಜನೆಯಲ್ಲಿ ವೈಯಕ್ತಿಕ ಹಾಗೂ ಸಮುದಾಯ ಕಾಮಗಾರಿಗಳ ಜೊತೆಗೆ ಶಾಲೆಗೆ ಸಂಬಂಧಿಸಿದ ಕಾಮಗಾರಿಗಳನ್ನು ಕಡ್ಡಾಯವಾಗಿ ಕ್ರಿಯಾಯೋಜನೆಯಲ್ಲಿ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಕಂದಕೂರ ಹೇಳಿದ್ದಾರೆ. ಜಿಲ್ಲೆಯ ಬೆಣಚಮಟ್ಟಿ ಗ್ರಾಮದಲ್ಲಿ ೨೦೨೬-೨೭ನೇ ಸಾಲಿನ ನರೇಗಾ ಕ್ರಿಯಾ ಯೋಜನೆ ತಯಾರಿಸುವ ಕುರಿತು ನಡೆದ ಗ್ರಾಮ ಸಭೆಯನ್ನು ಉದ್ದೇಶಿಸಿ ಮಾತನಾಡಿದರು. ನರೇಗಾ ಯೋಜನೆಯಡಿ ಶಾಲೆಗೆ ಬೇಕಾಗುವಂತ ಶೌಚಾಲಯ, ಅಡುಗೆ ಕೋಣೆ, ಕಂಪೌಂಡ್, ಆಟದ ಮೈದಾನಕ್ಕೆ ಮೊದಲ ಆದ್ಯತೆ ನೀಡಲಾಗಿದೆ. ಪ್ರತಿ ಶಾಲೆಗಳಲ್ಲಿ ಶೌಚಾಲಯ, ಅಡುಗೆ ಕೋಣೆ, ಕಂಪೌಂಡ್, ಆಟದ ಮೈದಾನ ಪರಿಶೀಲಿಸಿ, ಯಾವ ಶಾಲೆಗೆ ಯಾವುದು ಅವಶ್ಯಕವಾಗಿದೆ ಅವುಗಳನ್ನು ಕಡ್ಡಾಯವಾಗಿ ಹೆಸರನ್ನು ಸೇರಿಸಿ ಕ್ರಿಯಾ ಯೋಜನೆಯಲ್ಲಿ ತಯಾರಿಸಬೇಕು ಎಂದು ತಿಳಿಸಿದರು.

********

ಕುಟುಂಬಗಳ ಆರ್ಥಿಕ ಸುರಕ್ಷತೆಗೆ ಪೂರಕವಾದ ಜನ ಸುರಕ್ಷಾ ಯೋಜನೆ, ಪ್ರಧಾನಮಂತ್ರಿ ಜೀವನ್‌ಜ್ಯೋತಿ ಭೀಮಾ ಹಾಗೂ ಪ್ರಧಾನಮಂತ್ರಿ ಸುರಕ್ಷಾ ಭೀಮಾ ವಿಮಾ ಯೋಜನೆಗಳ ಮಹತ್ವದ ಕುರಿತು ಜನರಲ್ಲಿ ಜಾಗೃತಿ ಮೂಡಿಸಬೇಕು ಎಂದು ಯಾದಗಿರಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಲವೀಶ್ ಒರಡಿಯಾ ಹೇಳಿದ್ದಾರೆ. ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಡಿಸಿಸಿ, ಡಿಎಲ್‌ಆರ್‌ಸಿ ಸಭೆಯಲ್ಲಿ ಮಾತನಾಡಿ, ಎಸ್‌ಬಿಐ, ಲೀಡ್ ಬ್ಯಾಂಕ್, ಸರ್ಕಾರ ಮಹತ್ವಾಕಾಂಕ್ಷಿ ಯೋಜನೆಗಳ ಪ್ರಗತಿ ಕುರಿತು ಚರ್ಚಿಸಿದರು. ಗ್ರಾಮೀಣ ಪ್ರದೇಶದ ಪ್ರತಿ ಕುಟುಂಬದ ಭವಿಷ್ಯದ ಆರ್ಥಿಕ ಸುರಕ್ಷತೆ ಹಾಗೂ ಭದ್ರತೆಗೆ ಪಿಎಂ ಸುರಕ್ಷಾ ಭೀಮಾ, ಜೀವನ್ ಜ್ಯೋತಿ ಭೀಮಾ ವಿಮಾ ಯೋಜನೆ ಜಾರಿಗೊಳಿಸಲಾಗಿದೆ. ೧೮ ವರ್ಷ ಮೇಲ್ಪಟ್ಟವರು ಈ ವಿಮೆಯಡಿ ಹೆಸರು ನೋಂದಣಿಗೆ ಅರ್ಹರಾಗಿದ್ದಾರೆ. ಪ್ರತಿಯೊಬ್ಬರೂ ಯೋಜನೆಗಳ  ಲಾಭ ಪಡೆಯುವಂತೆ ಆಗಲು ಜಾಗೃತಿ ಮೂಡಿಸಿ, ಹೆಸರು ನೋಂದಣಿಗೆ ಪ್ರೋತ್ಸಾಹ ನೀಡಬೇಕು ಎಂದು ಸೂಚಿಸಿದರು.

****END****